ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 109 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:22-05-2018.

## ಸುತ್ತೋಲೆ

ವಿಷಯ: ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿ ವರ್ಷ ಹುತಾತ್ಮರ ದಿನ, ಗಣರಾಜ್ಯೋತ್ಸವ ದಿನ ಮತ್ತು ಸ್ವಾತಂತ್ರ್ಯ ದಿನದಂದು ದೇಶಕ್ಕಾಗಿ ಪ್ರಾಣಾರ್ಪಣೆಗೈದ ಸ್ವಾತಂತ್ರ್ಯ ಯೋಧರನ್ನು ಸ್ಮರಿಸುವ ಬಗ್ಗೆ.

****

ದೇಶಾದ್ಯಂತ ಅಸಂಖ್ಯಾತ ಮಹನೀಯರು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಿ ಪ್ರಾಣಾರ್ಪಣೆ ಮಾಡಿ ಹುತಾತ್ಮರಾಗಿರುತ್ತಾರೆ. ಕರ್ನಾಟಕ ರಾಜ್ಯದಲ್ಲಿಯೂ ಕೂಡ ಹಲವಾರು ಮಹನೀಯರು ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಬಲಿದಾನ ಮಾಡಿರುತ್ತಾರೆ. ಇಂತಹ ಮಹನೀಯರುಗಳ ಬಲಿದಾನದ ಫಲವಾಗಿ ಇಂದು ನಾವು ಸ್ವಾತಂತ್ರ್ಯವನ್ನು ಅನುಭವಿಸುತ್ತಿದ್ದೇವೆ. ದೇಶಕ್ಕಾಗಿ ಬಲಿದಾನಗೈದ ಹುತಾತ್ಮರನ್ನು ಗುರುತಿಸಿ ಅವರ ತ್ಯಾಗ ಬಲಿದಾನವನ್ನು ಸ್ಮರಿಸುವುದು ನಮ್ಮ ಕರ್ತವ್ಯವಾಗಿರುತ್ತದೆ. ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿದ ಮಹನೀಯರ ತ್ಯಾಗ ಬಲಿದಾನದ ಸ್ಮರಣೆಯಿಂದ ಯುವಜನಾಂಗದಲ್ಲಿ ರಾಷ್ಟ್ರಪ್ರೇಮ ಜಾಗೃತಗೊಳಿಸಿ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಮಾಡಬಹುದಾಗಿದೆ. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳ ವತಿಯಿಂದ ಪ್ರತಿವರ್ಷ ಜನವರಿ-26 ರ ಗಣರಾಜ್ಯೋತ್ಸವ ದಿನ, ಜನವರಿ-30 ರ ಹುತಾತ್ಮರ ದಿನ ಮತ್ತು ಆಗಸ್ಟ್-15 ರಂದು ಆಚರಿಸುವ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ದೇಶಕ್ಕಾಗಿ ಪ್ರಾಣಾರ್ಪಣೆಗೈದ ಸ್ವಾತಂತ್ರ್ಯ ಯೋಧರನ್ನು ಗುರುತಿಸಿ, ಅವರ ಸೇವೆ, ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸುವಂತೆ ಮತ್ತು ದೇಶದ ರಕ್ಷಣೆಗಾಗಿ ವೀರ ಮರಣವನ್ನಪ್ಪಿದ, ವೀರಯೋಧರ ಸ್ಮರಣೆ ಮಾಡಿ ಅವರ ಕುಟುಂಬದವರನ್ನು ಕರೆದು ಗೌರವಿಸಲು ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಸೂಚಿಸಿದೆ.

ಹೊರಡಿಸಿದೆ 8/6
........ ದಿನಾಂಕ
ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಇಲಾಖೆ

22/5/18
(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು / ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರು.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ - ಪ್ರಕಟಣೆಗಾಗಿ.
4) ಗಣಕ ಕೋಶ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ - ವೆಬ್‌ಸೈಟ್‌ನಲ್ಲಿ ಪ್ರಕಟಣೆಗಾಗಿ.
5) ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ಪರಿಷತ್, ನಂ.186/6, ಶಿರೂರು ಪಾರ್ಕ್ ರಸ್ತೆ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

02.06.18